Received by mail on 6/7/17



ಕಂಡಿಕೆ 220-G

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯಡಿಯಲ್ಲಿ ಕ್ರಿಶ್ಚಿಯನ್ ಸಮುದಾಯದ ಸ್ಮಶಾನಗಳಿಗೆ ಆವರಣ ಗೋಡೆ ನಿರ್ಮಾಣ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಹಾಯಾನುದಾನ ನೀಡುವ ಬಗ್ಗೆ.

ಓದಲಾಗಿದೆ:- 1. ಮಾನ್ಯ ಮುಖ್ಯಮಂತ್ರಿಯವರ 2017-18 ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ : 220-(7)

2. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರ ಪ್ರಸ್ತಾವನೆಯ ಸಂಖ್ಯೆ:ಅಸಂಇ ಆಯವ್ಯಯ ಭಾಷಣ /220/ಸಿಆರ್-175/2016-17, ದಿ:31.03.2017

*~*~*~*

**ಪ್ರಸ್ತಾವನೆ:-**

ಸನ್ಮಾನ್ಯ ಮುಖ್ಯಮಂತ್ರಿಯವರು ಮೇಲೆ (1) ರಲ್ಲಿನ 2017-18 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 220 ರ ಉಪಕಂಡಿಕೆ (7) ರಲ್ಲಿ ಈ ಕೆಳಕಂಡಂತೆ ಘೋಷಿಸಿರುತ್ತಾರೆ.

"ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿಗಾಗಿ 175 ಕೋಟಿ ರೂ.ಗಳನ್ನು ಒದಗಿಸಲಾಗುವುದು. ಜಾರಿಯಲ್ಲಿರುವ ಯೋಜನೆಗಳೊಂದಿಗೆ ಸ್ಮಶಾನಕ್ಕೆ ಗೋಡೆ ಮತ್ತು ಮೂಲಭೂತ ಸೌಕರ್ಯವನ್ನು ಒದಗಿಸಲಾಗುವುದು."

ಸನ್ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿರುವಂತೆ ಕ್ರಿಶ್ಚಿಯನ್ ಅಭಿವೃದ್ಧಿ ಯೋಜನೆಯಡಿಯಲ್ಲಿ ಕ್ರಿಶ್ಚಿಯನ್ ಸಮುದಾಯದ ಸ್ಮಶಾನಗಳಿಗೆ ಆವರಣ ಗೋಡೆ ನಿರ್ಮಾಣ ಮತ್ತು ಈ ಸ್ಮಶಾನಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸಹಾಯಾನುದನವನ್ನು ನೀಡಲು ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಪೂರ್ಣ ಪ್ರಸ್ತಾವನೆಯನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನರಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 209 ಎಂಡಿಎಸ್ 2017,**

**ಬೆಂಗಳೂರು, ದಿನಾಂಕ: 03.06.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರ 2017-18 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 220 ರ ಉಪಕಂಡಿಕೆ (7) ರಲ್ಲಿನ ಘೋಷಣೆಯಂತೆ ಕರ್ನಾಟಕ ರಾಜ್ಯದಲ್ಲಿನ ಕ್ರಿಶ್ಚಿಯನ್ ಸಮುದಾಯದ ಸ್ಮಶಾನಗಳಿಗೆ ಆವರಣ ಗೋಡೆ ನಿರ್ಮಿಸಲು ಹಾಗೂ ಈ ಸ್ಮಶಾನಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸಹಾಯಾನುದಾನ ನೀಡುವ ಈ ಯೋಜನೆಯನ್ನು 2017-18ನೇ ಸಾಲಿನಿಂದ ಜಾರಿಗೆ ಬರುವಂತೆ ಈ ಆದೇಶಕ್ಕೆ